**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 09.05.2020

**ಆದೇಶ**

1. ಕೇಂದ್ರ ಗೃಹ ಮಂತ್ರಾಲಯದ ದಿ. 01.05.2020 ರ ಆದೇಶ ಸಂಖ್ಯೆ 40-3 / 2020-ಡಿಎಂ-ಐ (ಎ)ರಲ್ಲಿ ಲಾಕ್‌ಡೌನ್ ಅವಧಿಯನ್ನು 04-05-2020 ರಿಂದ ಇನ್ನೂ ಎರಡು ವಾರಗಳವರೆಗೆ ವಿಸ್ತರಿಸಿದೆ ಮತ್ತು ಲಾಕ್‌ಡೌನ್ ಕ್ರಮಗಳ ಕುರಿತು ಹೊಸ ಮಾರ್ಗಸೂಚಿಗಳನ್ನು ಸಹ ಬಿಡುಗಡೆ ಮಾಡಿದೆ. ಇದು ದಿ. 04.05.2020 ರಿಂದ ಎರಡು ವಾರಗಳ ಅವಧಿಗೆ ಜಾರಿಯಲ್ಲಿರುತ್ತವೆ. ಪರಿಣಾಮವಾಗಿ, ಕರ್ನಾಟಕ ಸರ್ಕಾರವು ಆದೇಶ ಸಂ.ಕಂಇ 158 ಟಿಎನ್‌ಆರ್ 2020, ದಿ.02.05.2020ರಂದು ಲಾಕ್ ಡೌನ್ ಕ್ರಮಗಳ ಕುರಿತು ಹೊಸ ಮಾರ್ಗಸೂಚಿಗಳನ್ನು ಎರಡು ವಾರಗಳ ಅವಧಿಗೆ ದಿ. 04.05.2020 ರಿಂದ ಜಾರಿಗೆ ಬರುವಂತೆ ವಿಸ್ತರಿಸಿ ಆದೇಶಿಸಿದೆ.

2. ಸರ್ಕಾರಿ ಆದೇಶ ಸಂಖ್ಯೆ ಕಂಇ 158 ಟಿಎನ್‌ಆರ್ 2020, ದಿನಾಂಕ 02-05-2020ರನ್ನು ಮುಂದುವರೆಸುತ್ತಾ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು ನೀಡಿರುವ ನಿರ್ದೇಶನದಂತೆ ಅನುಮತಿಸಲಾದ ಚಟುವಟಿಕೆಗಳನ್ನು ಕೈಗೊಳ್ಳಲು, ವ್ಯಕ್ತಿಗಳು ಮತ್ತು ವಾಹನಗಳ ಚಲನವಲನಗಳಿಗೆ ಈ ಕೆಳಕಂಡ ರೀತಿಯಲ್ಲಿ ಅನುಮತಿ ನೀಡಲು ಕ್ರಮ ಕೈಗೊಳ್ಳತಕ್ಕದ್ದು.

ಎ) ಅನುಮತಿಸಲಾದ ಚಟುವಟಿಕೆಗಳನ್ನು ಬೆಂಗಳೂರು ಗ್ರಾಮೀಣ, ಬೆಂಗಳೂರು ನಗರ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ತುಮಕೂರು ಜಿಲ್ಲೆಗಳನ್ನು ಒಂದು ಘಟಕವಾಗಿ ಪರಿಗಣಿಸಬೇಕು ಮತ್ತು ಅದೇ ರೀತಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಒಂದು ಘಟಕವಾಗಿ ಪರಿಗಣಿಸಿ, ಹಗಲಿನ ವೇಳೆಯಲ್ಲಿ ಬೆಳಿಗ್ಗೆ 7 ರಿಂದ ಸಂಜೆ 7 ರವರೆಗೆ ಚಲಿಸುವ ಉದ್ದೇಶದಿಂದ ಒಂದೇ ಘಟಕವಾಗಿ ಪರಿಗಣಿಸಲಾಗುವುದು. ವ್ಯಕ್ತಿಗಳು ಕೆಲಸ ಮಾಡುತ್ತಿರುವ ಕಂಪನಿ / ಸಂಸ್ಥೆಗಳಿಂದ ನೀಡಲಾಗುವ ಪತ್ರದ ಮೇರೆಗೆ ಮತ್ತು ಕಂಪನಿ/ ಸಂಸ್ಥೆಯ ಅಧಿಕೃತ ಗುರುತಿನ ಚೀಟಿಯೊಂದಿಗೆ ಮಾತ್ರ ಚಲನವಲನಗಳಿಗೆ ಅನುಮತಿಸಿದೆ. ಆದ್ದರಿಂದ, ಈ ಜಿಲ್ಲೆಗಳಲ್ಲಿ ಚಲನೆಗೆ ಬೇರೆ ಯಾವುದೇ ಅಂತರ್ ಜಿಲ್ಲಾ ಪಾಸ್ ಗಳ ಅವಶ್ಯಕತೆ ಇರುವುದಿಲ್ಲ.

ಬಿ) ಇತರೆ ಜಿಲ್ಲೆಗಳಿಗೆ ಅನುಮತಿಸಲಾದ ಚಟುವಟಿಕೆಗಳಿಗೆ ಅಂತರ-ಜಿಲ್ಲೆಗಳ ಸಂಚಾರಕ್ಕಾಗಿ ಪಾಸ್ ಅಗತ್ಯವಿರುತ್ತದೆ. ಇದನ್ನು ಆಯಾಯ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಆಯುಕ್ತಾಲಯದ ಪೊಲೀಸ್ ಉಪ ಆಯುಕ್ತರು ನೀಡುತ್ತಾರೆ. ಅನುಮತಿಸಲಾಗದ ಚಟುವಟಿಕೆಗಳಿಗೆ ಅಂತರ್-ಜಿಲ್ಲಾ ಪಾಸನ್ನು ನೀಡಲಾಗುವುದಿಲ್ಲ, ಆದರೆ ಒಂದು ಬಾರಿಯ ಚಲನವಲನಕ್ಕಾಗಿ ಮಾತ್ರ ಸಿಲುಕಿರುವ ವ್ಯಕ್ತಿಗಳಿಗೆ (stranded persons) ಪಾಸ್ ನ್ನು ನೀಡಬಹುದು.

ಸಿ) ಸಂಜೆ 7 ರಿಂದ ಬೆಳಿಗ್ಗೆ 7ರ ನಡುವಿನ ರಾತ್ರಿಯ ಅವಧಿಯ ಕರ್ಫ್ಯೂ ಸಮಯಕ್ಕೆ ಸಂಬಂಧಿಸಿದಂತೆ, ಈ ಹಿಂದೆ ಅಗತ್ಯ ಚಟುವಟಿಕೆಗಳಿಗೆ ನೀಡಿದ ಪಾಸ್ ಮಾನ್ಯತೆ ಹೊಂದಿರುತ್ತದೆ. ಸಂಬಂಧಪಟ್ಟ ಕೈಗಾರಿಕೆಗಳು ಮತ್ತು ವಾಣಿಜ್ಯ, ಐಟಿ ಮತ್ತು ಬಿಟಿ, ಇತ್ಯಾದಿ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಇಲಾಖಾ ಕಾರ್ಯದರ್ಶಿಗಳು, ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಆಯುಕ್ತಾಲಯದ ಪೊಲೀಸ್ ಉಪ ಆಯುಕ್ತರಿಗೆ ಪಾಸ್ ನೀಡುವಂತೆ ಶಿಫಾರಸ್ಸು ಮಾಡುತ್ತಾರೆ.

3. ಮೇಲೆ ತಿಳಿಸಿದ ಅಂಶಗಳನ್ನು ಇಲಾಖೆಗಳು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಬಿಬಿಎಂಪಿ, ಪೊಲೀಸ್ ಆಯುಕ್ತರು ಮತ್ತು ಇತರ ಇಲಾಖೆಗಳ ಮುಖ್ಯಸ್ಥರು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು.

***(ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಅನುಮೋದಿತ)***

**(ಟಿ.ಕೆ.ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.